# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –259 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:08–05–2025 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 259 | RNI No: KARKAN/2023/88462 | KA/SK/CTA-874/2024-2026 | Chitradurga | Date: 08-05-2025 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಆಪರೇಷನ್ ಸಿಂಧೂರ: ದೇಶದ ಸೈನಿಕರ ಪರಾಕ್ರಮಕ್ಕೆ ಸಲಾಂ; ರಾಮದಾಸ್ 2

ನಗರದ ಸ್ವಚ್ಚತೆಗೆ ಹೆಚ್ಚು ಆದ್ಯತೆ: ಶಾಸಕ ಟಿ.ರಘುಮೂರ್ತಿ 3

ಬಹುಶಃ ಇದರಷ್ಟು ರೋಚಕ ಇದರಷ್ಟು ಆತ್ಮ ತೃಪ್ತಿ ಇನ್ನೊಂದಿರಲಾರದು.......... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಏಳು ರಾಷ್ಟ್ರಗಳಿಗೆ ಪ್ರಯಾಣ ಬೆಳೆಸಲಿರುವ ಸಾಣೇಹಳ್ಳಿ ಶ್ರೀಗಳು

» ಹೊಸದುರ್ಗ



ಬೆಂಗಳೂರಿನ ರಾಷ್ಟ್ರೀಯ ಬಸವ ಪ್ರತಿಷ್ಠಾನ ಆಯೋಜಿಸಿರುವ ಜಗತ್ತಿನ ಮೊದಲ ಪಾರ್ಲಿಮೆಂಟ್ "ಅನುಭವ ಮಂಟಪ ಹಾಗೂ ವಚನಗಳ ಜಾಗತಿಕ ಮೌಲ್ಯಗಳು" ಎಂಬ ವಿಷಯ ಕುರಿತು ಇಂಗ್ಲೇಂಡ್, ಫ್ರಾನ್ಸ್, ಜರ್ಮನಿ,ಸ್ವಿಜ್ಜರ್ ಲ್ಯಾಂಡ್ ಹಾಗೂ ಇತರ ಏಳು ರಾಷ್ಟ್ರಗಳಲ್ಲಿ ಆಶೀರ್ವಚನ ನೀಡಲು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳವರು ಮೇ 8 ರಂದು ಗುರುವಾರದಂದು ವಿದೇಶ ಪ್ರವಾಸ ಬೆಳೆಸಲಿದ್ದಾರೆ.

### ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಾತಿಗೆ ಅರ್ಜಿ

» ಚಿತ್ರದುರ್ಗ

2025–26ನೇ ಸಾಲಿನಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಚಿತ್ರದುರ್ಗದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಲಭ್ಯವಿರುವ ಹಾಗೂ ರಾಜ್ಯದ ಆಯ್ದ 30 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಮತ್ತು 13 ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಲಭ್ಯವಿರುವ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸ್ಥಾನಗಳನ್ನು ರಾಜ್ಯಮಟ್ಟದಲ್ಲಿ ನಾನ್ ಇಂಟರ್ ಆಕ್ಟೀವ್ ಕೌನ್ಸೆಲಿಂಗ್ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ (ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ) ಅರ್ಜಿ ಆಹ್ವಾನಿಸಲಾಗಿದೆ. ಮೇ 15 ಅರ್ಜಿ ಸಲ್ಲಿಸಲು ಕೊನೆಯ ದಿನ.

ಅಸಕ್ತ ಅಭ್ಯರ್ಥಿಗಳು ಮೇ. 5 ರಿಂದ ಮೇ.15 ರವರಗೆ ತಿತಿತಿ.ಜಣಜಇ.ಇಚಿಡಿಟಿಚಿಣಚಿಇ.ರಂತ.ಎಟ ವೆಬ್‌ಸೈಟ್ ಮೂಲಕ ಅರ್ಜಿ ಹಾಗೂ ಮಾಹಿತಿ ಪುಸ್ತಕ ಪಡೆಯಬಹುದಾಗಿದೆ. ಭರ್ತಿಮಾಡಿದ ಅರ್ಜಿಯನ್ನು ಮೇ.15 ರಂದು ಸಂಜೆ 5.30 ಗಂಟೆ ಒಳಗೆ ಪೂರಕ ದಾಖಲೆಗಳೊಂದಿಗೆ ಸಂಸ್ಥೆಯ ಕಂಪ್ಯೂಟರ್ ವಿಭಾಗದಲ್ಲಿ ಸಲ್ಲಿಸಿ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ದಾಖಲಿಸಿಕೊಂಡು, ಕೋರ್ಸುಗಳ ಆದ್ಯತಾ ಪಟ್ಟಿಯನ್ನು ದಾಖಲಿಸಿ ಸ್ವೀಕೃತಿ ಪಡೆಯಬೇಕು.

ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇ.35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಮೇ. 15 ರಂದು ಸಂಜೆ 6 ಗಂಟೆಯ ನಂತರ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಣೆ ಮಾಡಲಾಗುವುದು. ಮೇ.16 ರಂದು ಮೆರಿಟ್ ಪಟ್ಟಿಗೆ ಆಕ್ಷೇಪಣೆ ಮತ್ತು ತಿದ್ದುಪಡಿ ನಡೆಸಲಾಗುವುದು. ಮೇ.17 ಸಂಜೆ 5.30 ಗಂಟೆಯ ನಂತರ ಅಂತಿಮ ಮೆರಿಟ್ ಪಟ್ಟಿ ಪ್ರಕಟಣೆ ಮಾಡಲಾಗುವುದು. ಮೇ.21 ರಂದು ಸಂಜೆ 5.30 ಗಂಟೆಯ ನಂತರ ಸೀಟು ಹಂಚಿಕೆ ಮಾಡಲಾಗುವುದು. ಮೇ. 22 ರಿಂದ ಮೇ. 23 ರವರಗೆ ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ನಿಗದಿತ ಶುಲ್ಕದೊಂದಿಗೆ ಪ್ರವೇಶ ಪ್ರಕ್ರಿಯೆ ನಡೆಸಲಾಗುವುದು. ಮೇ.24 ರಿಂದ ಮೇ.31 ರವರಗೆ ಸೀಟು ಹಂಚಿಕೆಯಾದ ನಂತರ ಭರ್ತಿ ಆಗದೆ ಉಳಿದ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿಯೇ ಆಪ್‌ಲೈನ್ ಮೂಲಕ ಮೆರಿಟ್ ಮತ್ತು ರೋಸ್ಟರ್ ಅನುಗುಣವಾಗಿ ಸೀಟು ಹಂಚಿಕೆ ಮಾಡಲಾಗುವುದು ಎಂದು ಚಿತ್ರದುರ್ಗ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲ ಆರ್. ರಾಘವೇಂದ್ರಚಾರ್ ತಿಳಿಸಿದ್ದಾರೆ.

### ಇಂದು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ

» ಹೊಸದುರ್ಗ

ಈ ಭಾರಿ ನಡೆದ ಎಸ್.ಎಸ್.ಎಲ್.ಸಿ.ಪರೀಕ್ಷೆಯಲ್ಲಿ 600 ಕ್ಕಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಮಾ. 8 ರಂದು ಗುರುವಾರ ಪಟ್ಟಣದ ಸರ್ಕಾರಿ ಜೂನಿಯರ್ ಕಾಲೇಜು ಪ್ರೌಢಶಾಲಾ ವಿಭಾಗದ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನ ಆಯೋಜಿಸಲಾಗಿದೆ ಎಂದು ಉಪ ಪ್ರಾಂಶುಪಾಲ ಜಿ. ನಾಗೇಂದ್ರಪ್ಪ ತಿಳಿಸಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕ ಬಿ.ಜಿ.ಗೋವಿಂದಪ್ಪ,ಕ್ಷೇತ್ರ ಶಿಕ್ಷಣಾಧಿಕಾರಿ ಸೈಯಾದ್‌ಮೋಸಿನ್, ಎಸ್.ಡಿ.ಎಂ.ಸಿ ಅಧ್ಯಕ್ಷರು ಸದಸ್ಯರುಗಳು ಸೇರಿದಂತೆ ಇಲಾಖೆಯ ಅಧಿಕಾರಿಗಳು ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

### ಜಾನಪದ ಜನರ ಧ್ವನಿಯಾಗಿದೆ : ಶಾಸಕ ಟಿ.ರಘುಮೂರ್ತಿ

# ಜಾನಪದ ಕಲೆ ಈ ನಾಡಿನ ಜೀವಾಳ





» ಚಳ್ಳಕೆರೆ

ಭಾರತ ದೇಶ ವೈವಿಧ್ಯಮಯ ಸಂಸ್ಕೃತಿಯನ್ನು ಹೊಂದಿದೆ, ವಿಶೇಷವಾಗಿ ಕರ್ನಾಟಕ ಕಲೆಗಳ ಬೀಡಾಗಿದ್ದು, ಗ್ರಾಮೀಣ ಭಾಗಗಳಲ್ಲಿ ಹುಟ್ಟಿಬೆಳೆದ ಜಾನಪದ ಕಲೆಯನ್ನು ಉಳಿಸಿ, ಬೆಳೆಸುವಲ್ಲಿ ಹೆಚ್ಚು ಸಹಕಾರ ನೀಡುತ್ತಿದ್ಧಾರೆ. ಗ್ರಾಮೀಣ ಸೊಗಡಿನ ಜಾನಪದ ಇಂದಿಗೂ ತನ್ನ ವೈವಿಧ್ಯತೆಯನ್ನು ಉಳಿಸಿಕೊಂಡಿಯಲ್ಲದೆ, ಜಾನಪದ ನಮ್ಮೆಲ್ಲರ ಉಸಿರಾಗಿದೆ ಎಂದು ಶಾಸಕ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಾನಪದ ಉತ್ಸವ–2025 ನಮ್ಮ ಸಂಸ್ಕೃತಿ, ನಮ್ಮ ಹೆಮ್ಮೆ ಕಾರ್ಯಕ್ರಮವನ್ನು ಧ್ಯಾನಗಳ ರಾಶಿಗೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಜಾನಪದ ಉತ್ಸವದ ಮೆರವಣಿಗೆ ನಗರದ ಅಂಭೇಡ್ಕರ್ ವೃತ್ತದಿಂದ ಆರಂಭಗೊಂಡು ವಾಲ್ಮೀಕಿ, ಜಗಜೀವನರಾಮ್ ವೃತ್ತದ ಮೂಲಕ



ಜೋಡಿನ ಬಂಡಿಯಲ್ಲಿ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿನಿಯರು ಸೀರೆಗಳಿಂದ ಕಂಗೊಳಿಸಿದರೆ, ವಿದ್ಯಾರ್ಥಿಗಳ ಪಂಚೆ, ಶರ್ಟ್ ಧರಿಸಿದ್ದರು, ಕಾಲೇಜಿನ ಪ್ರಾಂಶುಪಾಲರೂ ಸೇರಿದಂತೆ ಎಲ್ಲಾ ಬೋಧಕ ವರ್ಗ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹ ಜಾನಪದ ಸಂಸ್ಕೃತಿ ಬಿಂಬಿಸುವ ಪಂಚೆ, ಅಂಗಿ ಧರಿಸಿಮೆರವಣಿಗೆಯಲ್ಲಿ ಪಾಲ್ಗೊಂಡರು.

ಕಾರ್ಯಕ್ರಮದುದ್ದಕ್ಕೂ ಯಾವುದೇ ಪಾಶ್ಚಿಮಾತ್ಯ ವಿಚಾರಕ್ಕೆ ಅವಕಾಶವಿರಲಿಲ್ಲ, ಇಡೀ ಕಾರ್ಯಕ್ರಮ ಜಾನಪದ ಶೈಲಿಯಲ್ಲೇ ನಡೆಯಿತು. ಕಾರ್ಯಕ್ರಮಕ್ಕೆ ಆಗಮಿಸಿದ ಶಾಸಕರನ್ನು ಕಾಲೇಜು ಆವರಣದಿಂದಲೇ ಅಲಂಕರಿಸಿದ ಜೋಡೆತ್ತಿನ ಗಾಡಿನಲ್ಲಿ ವಿವಿಧ ಕಲಾತಂಡಗಳೊಂದಿಗೆ ವೇದಿಕೆ ಕರೆತರಲಾಯಿತು. ಈ ಸಂದರ್ಭದಲ್ಲಿ ಸಾಂಪ್ರದಾಯಿಕ ಕಹಳೆ ಮೊಳಗಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲಪ್ರೊ.ಬಿ.ಎಸ್.ಮಂಜುನಾಥ, ದಾವಣಗೆರೆ ವಿಶ್ವವಿದ್ಯಾಲಯ ತನ್ನ ವ್ಯಾಪ್ತಿಯ ಎಲ್ಲಾ ಕಾಲೇಜಿನಲ್ಲಿ ಪ್ರತಿವರ್ಷವೂ ಜಾನಪದ ಸಂಸ್ಕೃತಿ ಬಿಂಬಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಜಾನಪದ ಕಲೆ, ಸಂಸ್ಕೃತಿಯ ಬಗ್ಗೆ ಜಾಗೃತಿ ಮೂಡಿಸುತ್ತಿದೆ. ಇಂದಿನ ಕಾರ್ಯಕ್ರಮದಲ್ಲಿ ಎಲ್ಲರ ಸಹಕಾರದಿಂದ ನಿರೀಕ್ಷೆಗೂ ಮೀರಿ ಹೆಚ್ಚಿನ ವಿದ್ಯಾರ್ಥಿಗಳು ಸೇರಿದ್ದಾರೆ. ಸಾರ್ವಜನಿಕರೂ ಸಹ ಕಾರ್ಯಕ್ರಮಕ್ಕೆ ಸಾಕ್ಷಿಯಾಗಿದ್ದಾರೆ. ಜಾನಪದ ಸಂಸ್ಕೃತಿ ಉತ್ಸವ ಯಶಸ್ವಿಯತ್ತ ಮುನ್ನಡೆದಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಕವಿತಾ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ಸುಮ, ಸುಜಾತ, ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಎಂ.ಜೆ.ರಾಘವೇಂದ್ರ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಬಿ.ಪಿ.ಪ್ರಕಾಶ್‌ಮುರ್ತಿ, ಜಿ.ಟಿ.ಶಶಿಧರ, ಪ್ರಾಧ್ಯಾಪಕರಾದ ಡಾ.ಕೆ.ಚಿತ್ತಯ್ಯ, ರಾಜಶೇಖರಪ್ಪ, ಡಾ.ಜಿ.ವಿ.ರಾಜಣ್ಣ, ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

# ಉಗ್ರರ ನೆಲೆ ನಾಶಗೊಳಿಸಿ ಪರಾಕ್ರಮ ಮೆರೆದಿದ್ದಾರೆ

» ಬೆಂಗಳೂರು

ದೇಶದ ಸೇನಾಪಡೆ ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿ ಪರಾಕ್ರಮ ಮೆರೆದಿದ್ದಾರೆ. ದೇಶದ ರಾಜ್ಯದ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ರಾಷ್ಟ್ರೀಯ ಭದ್ರತೆ ವಿಷಯಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಈ ದಾಳಿಯನ್ನು ಎಲ್ಲರೂ ಬೆಂಬಲಿಸಿದ್ದೇವೆ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ



ಗಂಟೆಯಾಗಿದೆ. ನಮ್ಮ ಸರ್ಕಾರ ನೂರಕ್ಕೆ ನೂರರಷ್ಟು ಸೇನೆ ಕೈಗೊಂಡಿರುವ ಕ್ರಮವನ್ನು ಬೆಂಬಲಿಸುತ್ತದೆ.

ಆಪರೇಷನ್ ಸಿಂಧೂರ ಹೆಸರಿನಲ್ಲಿ ಸುಮಾರು 9 ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿದೆ. ಕೇವಲ ಉಗ್ರಗಾಮಿಗಳ ನೆಲೆಗಳ ಮೇಲೆ ಮಾತ್ರ ದಾಳಿ ನಡೆಸಲಾಗಿದೆ. ನಮ್ಮ ಸೈನಿಕರು ಉಗ್ರರ ನೆಲೆಗಳನ್ನು ಪತ್ತೆ ಹಚ್ಚಿ ದಾಳಿ ಮಾಡಿದ್ದು, ಅಮಾಯಕ ಜನರ ಸಾವು ನೋವು ತಪ್ಪಿಸಿದ್ದಾರೆ.


ಪುಟ 2


### ನುಡಿದಂತೆ ನಡೆದ ಮೋದಿ, ದೇಶದ ಸೈನಿಕರು: ಕೆ.ಎಸ್.ನವೀನ್

» ಚಿತ್ರದುರ್ಗ

ಭಾರತದ ಕಾಶ್ಮೀರದ ಪೆಹಲ್ಗಾಂ ಪಾಕಿಸ್ತಾನದ ಉಗ್ರಗಾಮಿ ಸಂಘಟನೆ ಅಮಾಯಕ ಪ್ರವಾಸಿಗರನ್ನು ಧರ್ಮವನ್ನು ಕೇಳಿ ಅನೇಕ ಮುಗ್ಧ 27ಕ್ಕೂ ಹೆಚ್ಚು ಜನರನ್ನು ಕೊಂದು ದ್ವೇಷದ ಕೃತ್ಯ ನಡೆಸಿದ್ದು ದೇಶ ಅಲ್ಲದೆ ಅಂತರಾಷ್ಟ್ರೀಯ ಸಮುದಾಯಗಳು ಈ ಕೃತ್ಯವನ್ನು ತೀವ್ರವಾಗಿ ಖಂಡಿಸಿದ್ದವು ಇಂದು ಬುಧವಾರ ಬೆಳಗಿನ ಪಾಕಿಸ್ತಾನದಲ್ಲಿರುವ ಸುಮಾರು 9 ಉಗ್ರಗಾಮಿಗಳ ಹಡಗು ತಾಣಗಳನ್ನು ಗುರಿಯಾಗಿಸಿಕೊಂಡು ಭಾರತ ಆಪರೇಷನ್ ಸಿಂಧೂರ ಕಾರ್ಯಾಚರಣೆ ಮುಖಾಂತರ ಭಾರತದ ಸೈನಿಕರು ಪಾಕಿಸ್ತಾನಕ್ಕೆ ತಕ್ಕ ಉತ್ತರವನ್ನು ನೀಡಿದ್ದಾರೆ.

**ಪ್ರಮುಖ ಸುದ್ದಿ**

# ಆಪರೇಷನ್ ಸಿಂಧೂರ ಹೆಸರಿನಲ್ಲಿ ನಮ್ಮ ಸೇನೆ ಪಾಕಿಸ್ತಾನ್ ಉಗ್ರರ ನೆಲೆಗಳನ್ನು ಹೊಡೆದುರುಳಿಸಿವೆ

» ಹೊಸದುರ್ಗ

ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ಸಿಗೆ ಬುದ್ಧಿ ಕಲಿಸಲು ಮತದಾರರು ಸಿದ್ದರಿದ್ದಾರೆ, ನಮ್ಮಲ್ಲಿರುವ ಗೊಂದಲ ನಿವಾರಣೆ ಮಾಡಿ ಮುಂದಿನ ಎಲ್ಲಾ ಚುನಾವಣೆಗೆ ಬಿಜೆಪಿ ಸಿದ್ಧತೆ ಮಾಡಿಕೊಳ್ಳುತ್ತೇವೆ, ಆಪರೇಷನ್ ಸಿಂಧೂರ ಹೆಸರಿನಲ್ಲಿ ನಮ್ಮ ಸೇನೆ ಪಾಕಿಸ್ತಾನ್ ಉಗ್ರರ ನೆಲೆಗಳನ್ನು ಹೊಡೆದುರಿಲಿಸಿವೆ, ಇದು ನಮ್ಮ ಪ್ರಧಾನಿ ಮೋದಿಯವರ ತಾಕತ್ತು ಜಗತ್ತಿಗೆ ಪರಿಚಯವಾಗಿದೆ. ಎಂದು ವಿಧಾನ ಪರಿಷತ್ ಸದಸ್ಯ ಕೆ ಎಸ್ ನವೀನ್ ತಿಳಿಸಿದರು.

ಪಟ್ಟಣದ ಜಯದೇವ ಸಮುದಾಯ ಭವನದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು ಭಾರತದ ಸುಂದರ ತಾಣ ಪೆಹಲ್ಗಾಮ್ ನಲ್ಲಿ ತನ್ನ ಕುಟುಂಬದೊಂದಿಗೆ ಸಂತಸ ಕ್ಷಣಗಳನ್ನು ಅನುಭವಿಸುತ್ತಿದ್ದ



ಅಮಾಯಕ 26 ಭಾರತೀಯರ ಹತ್ಯೆಮಾಡಿದ್ದ ಆತಂಕವಾದಿಗಳು, ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ದಾಳಿ ಮಾಡಿ ಯಶಸ್ವಿಯಾಗಿದ್ದಾರೆ ನನ್ನ ಭಾರತೀಯ ಸೇನೆ ಪೆಹಲ್ಗಾಮ್ ನಲ್ಲಿ ನನ್ನ ಸಹೋದರಿಯರ ಹಣೆಯ ಸಿಂಧೂರ ಅಳಿಸಿದ ಪಾತಕಿಗಳ ಎಡೆಮುರಿ ಕಟ್ಟಿ ಕಾಶ್ಮೀರಕ್ಕೆ ಸುಂದರ ತಿಲಕ ಇಟ್ಟ ದೇಶದ ಹೆಮ್ಮೆಯ ಪ್ರಧಾನಿಗೆ ಅಭಿನಂದನೆಗಳು ಎಂದರು. ಪುರಸಭಾ ಸದಸ್ಯ ದಾಳಿಂಬೆ ಗಿರೀಶ್ ಮಾತನಾಡಿ ಭಾರತೀಯರ ಸ್ವಾಭಿಮಾನದ ಪ್ರತಿಷ್ಠೆಯ ಪ್ರಶ್ನೆಯಾಗಿ ಉಳಿದಿದ್ದ ಪೆಹಲ್ಗಾಮ್ ಘಟನೆ ಮಾಸುವ ಮುನ್ನವೇ ನಮ್ಮ ಭಾರತದ ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ಹೆಮ್ಮೆಯ ಸೈನ್ಯ ಪಾಕಿಸ್ತಾನದ ಉಗ್ರರ ಅಡಗು ತಾಣಗಳ ಹುಟ್ಟಡಗಿಸಿ ಪ್ರಪಂಚಕ್ಕೆ ಭಾರತದ ಶಕ್ತಿಯನ್ನು ಅನಾವರಣಗೊಳಿಸಿದ ಕೀರ್ತಿ ಪ್ರಧಾನಿ ಮೋದಿ ಅವರಿಗೆ ಸಲ್ಲುತ್ತದೆ. ಕೇಂದ್ರ ಸರ್ಕಾರ ಮತ್ತು ಸೈನ್ಯದ ಬಗ್ಗೆ ಅಪಹಾಸ್ಯ ಮಾಡುವವರು ಮುಂದಾದರು ಬಾಯಿ ಮುಚ್ಚಿಕೊಳ್ಳಲೇಬೇಕು ಎಂದರು.

ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಬುರುಡೇಕಟ್ಟೆ ರಾಜೇಶ್, ಬಿಜೆಪಿ ಮಂಡಲ ಅಧ್ಯಕ್ಷ ಗೂಳಿಹಟ್ಟಿ ಜಗದೀಶ್, ಪುರಸಭಾ ಅಧ್ಯಕ್ಷೆ ರಾಜೇಶ್ವರಿ, ಉಪಾಧ್ಯಕ್ಷೆ ಗೀತಾ, ಪುರಸಭಾ ಮಾಜಿ ಅಧ್ಯಕ್ಷ ಶ್ರೀನಿವಾಸ್, ಸದಸ್ಯರಾದ ದಾಳಿಂಬೆ ಗಿರೀಶ್ ಮಂಜುನಾಥ್, ನಾಗರಾಜ್, ಮುಖಂಡರುಗಳಾದ ಮಾವಿನಕಟ್ಟೆ ಗುರುಸ್ವಾಮಿ, ಹೆಬ್ಬಳ್ಳಿ ಮಲ್ಲಿಕಾರ್ಜುನ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಉಗ್ರರ ನೆಲೆ ನಾಶಗೊಳಿಸಿ ಪರಾಕ್ರಮ ಮೆರೆದಿದ್ದಾರೆ

» ಮೊದಲ ಪುಟದಿಂದ

ನಮ್ಮ ಸೈನಿಕರ ಕಾರ್ಯದಕ್ಷತೆಗೆ ದೊಡ್ಡ ಸಲಾಂ. ಈ ದಾಳಿಯನ್ನು ನಾವು ಸ್ವಾಗತಿಸುತ್ತೇವೆ. ಕಾಶ್ಮೀರದ ಪಹಲ್ಗಾಂವ್ನಲ್ಲಿ ಅಮಾಯಕ 26ಜನ ಹತ್ಯೆ ನಡೆಸಿದ ಉಗ್ರರನ್ನು ಬೆಂಬಲಿಸುವವರು, ಸಾಕುವವರು ಸಹ ಪಾಕಿಸ್ತಾನದವರೇ ಎಂಬುವುದು ಸ್ಪಷ್ಟವಾಗಿದೆ. ನಾವು ಕೇಂದ್ರ ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಂಪೂರ್ಣ ಬೆಂಬಲವನ್ನು ವ್ಯಕ್ತಪಡಿಸಿದ್ದೇವೆ. ರಾಜ್ಯದಲ್ಲಿ ಸುರಕ್ಷತೆಯ ಕುರಿತು ಎಲ್ಲಾ ಎಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಉಗ್ರರ ಮೇಲಿನ ದಾಳಿ ಹಿನ್ನೆಲೆಯಲ್ಲಿ ಸಂವಿಧಾನ ಉಳಿಸಿ ಅಡಿಯಲ್ಲಿ ರಾಯಚೂರಿನಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನಾ ಕಾರ್ಯಕ್ರಮನ್ನು ರದ್ದುಗೊಳಿಸಲಾಗಿದೆ.

### ಕಾಡುಗೊಲ್ಲ ಪ್ರತಿಭಾನ್ವಿತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಅರ್ಜಿ ಆಹ್ವಾನ

» ಹೊಸದುರ್ಗ

2025–26ನೇ ಸಾಲಿನ ಕಾಡುಗೊಲ್ಲ ಪ್ರತಿಭಾನ್ವಿತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರವನ್ನು ಪ್ರತಿ ವರ್ಷದಂತೆ ಕಾಡುಗೊಲ್ಲ ನೌಕರರ ಬಳಗವು ಹಮ್ಮಿಕೊಂಡಿದ್ದು ಸದರಿ ಪುರಸ್ಕಾರಕ್ಕೆ ಎಸೆಸೆಲ್ಸಿಯಲ್ಲಿ ಶೇಕಡ 75 ಹಾಗೂ ಪಿಯುಸಿಯಲ್ಲಿ ಶೇ.85 ಅಂಕ ಪಡೆದ ವಿದ್ಯಾರ್ಥಿಗಳು ತಮ್ಮ ಭಾವಚಿತ್ರ ಅಂಕಪಟ್ಟಿಯೊಂದಿಗೆ ಈ ಕೆಳಕಂಡ ದೂರವಾಣಿಗಳಿಗೆ ಸಂಪರ್ಕಿಸಿ ಅವರ ವಾಟ್ಸಪ್ ಗಳಿಗೆ ಮಾಹಿತಿ ಕಳಿಸಿಕೊಡಲು ಕೋರಿದೆ. ಅರ್ಜಿಗಳನ್ನು ಕಳುಹಿಸಲು ಮೇ 30 ಕಡೆಯ ದಿನವಾಗಿದ್ದು ಹೆಚ್ಚಿನ ಮಾಹಿತಿಗೆ ಧನಂಜಯ ಮೆಂಗಸಂದ್ರ ಮೋ: 9972350827 ಹಾಗೂ ,ಶ್ರೀನಿವಾಸ್ ಮೋ: 7353560857 ಸಂಪರ್ಕಿಸಬಹುದು.

### ನೀರಿನಲ್ಲಿ ಮುಳುಗಿದ್ದ ವ್ಯಕ್ತಿಯ ಶವ ಪತ್ತೆ

» ಹೊಸದುರ್ಗ

ಕುರಿಗಳ ಮೈ ತೊಳೆಯಲು ಹೋಗಿ ಕಾಲು ಬಿದ್ದು ನೀರುಪಲಾಗಿದ್ದ ವ್ಯಕ್ತಿಯೋರ್ವನ ಶವವನ್ನ ಮಂಗಳವಾರ ತಡರಾತ್ರಿ ಸುಮಾರು 1 ಗಂಟೆಯ ಸಮಯದಲ್ಲಿ ಗ್ರಾಮಸ್ಥರ ಸಹಕಾರದಿಂದ ಈಜುಗಾರರು, ಪೋಲಿಸ್ ಇಲಾಖೆ ಮತ್ತು ಅಗ್ನಿ ಶಾಮಕ ದಳ ಸಿಬ್ಬಂಧಿಯವರ ಪ್ರಯತ್ನದಿಂದ ನೀರುಪಾಲಾಗಿದ್ದ ತಿಮ್ಮಣ್ಣನ ಶವವನ್ನು ಹೊರತೆಗೆದು ವಾರಸುಧಾರರಿಗೆ ಒಪ್ಪಿಸಲಾಗಿದೆ ಎಂದು ಸಿಪಿಐ ರಮೇಶ್ ತಿಳಿಸಿದ್ದಾರೆ. ಘಟನೆಯ ವಿವರ: ಮಂಗಳವಾರ ಕುರಿಗಳ ಮೈ ತೊಳೆಯಲು ಹೋಗಿದ್ದ ತಾಲೂಕಿನ ಮಾಡದಕೆರೆ ಹೋಬಳಿ ಅತ್ತಿಮಗ್ಗೆ ಮೇಗಳಹಟ್ಟಿ ಗ್ರಾಮದ ಗ್ರಾಮದ ಕುರಿಗಾಯಿ ತಿಮ್ಮಣ್ಣ (35) ಹಾಗೂ ಈತನ ಪತ್ನಿ ಪುಟ್ಟಮ್ಮ (30) ಎಂಬುವವರು ತಾಲೂಕಿನ ಖಾನಿ ಹಳ್ಳದಲ್ಲಿ (ವಾಣಿವಿಲಾಸ ಸಾಗರದ ಹಿನ್ನೀರು ಪ್ರದೇಶ) ತಿಮ್ಮಣ್ಣ ಮತ್ತು ಈತನ ಪತ್ನಿ ಇಬ್ಬರೂ ಸಹಾ ಕಾಲು ಜಾರಿ ನೀರಿನಲ್ಲಿ ಮುಳುಗಿದ್ದರು ವಿಷಯ ತಿಳಿದ ಕೂಡಲೆ ಗ್ರಾಮಸ್ಥರು, ರಕ್ಷಣಾ ಇಲಾಖೆಯವರು ಹಾಗೂ ಅಗ್ನಿ ಶಾಮಕ ದಳದ ಸಿಬ್ಬಂಧಿಯವರು ಸ್ಥಳಕ್ಕೆ ಧಾವಿಸುವ ಹೊತ್ತಿಗೆ ಮಬ್ಬುಗತ್ತಲಾಯಿತು ಆದರೂ ಪುಟ್ಟಮ್ಮನ ಶವವನ್ನು ಪತ್ತೆ ಮಾಡಿ ಹೊರತೆಗೆಯಲಾಯಿತು. ಪೂರ್ತಿ ಕತ್ತಲಾಗಿದ್ದರಿಂದ ತಿಮ್ಮಣ್ಣನ ಶವವನ್ನ ಹುಡುಕಿ ಹೊರ ತೆಗೆಯಲು ಸಾಧ್ಯವಾಗಿರಲಿಲ್ಲ ಆದರೂ ಸಹಾ ಇದೇ ದಿನ ಇಡೀ ರಾತ್ರಿ ಕಾರ್ಯಚರಣೆ ಮಾಡಿದ ನಂತರ ತಿಮ್ಮಣ್ಣನ ಶವ ಪತ್ತೆಯಾಗಿದ್ದು ಎರಡೂ ಶವಗಳನ್ನು ವಾರಸುದಾರರಿಗೆ ಒಪ್ಪಿಸಲಾಗಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಓಪನ್ ಹೌಸ್ ಕಾರ್ಯಕ್ರಮ

» ದಾವಣಗೆರೆ

ಮೇ.9 ರಿಂದ 11 ರವರೆಗೆ ಮೈಸೂರಿನ ಸಿಪೆಟ್ ಸಂಸ್ಥೆಯಲ್ಲಿ ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ ಓಪನ್ ಹೌಸ್' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ,ಸಾರ್ವಜನಿಕರು ಸಂಸ್ಥೆಗೆ ಬೇಟಿ ನೀಡಿ ಸಿಪೆಟ್ ನಲ್ಲಿ ಲಭ್ಯವಿರುವ ಶಿಕ್ಷಣ ಸೌಲಭ್ಯ ಮತ್ತು ಉದ್ಯೋಗಾವಕಾಶಗಳ ಕುರಿತು ಮಾಹಿತಿಯನ್ನು ಪಡೆದುಕೊಳ್ಳಬಹುದು ಹೆಚ್ಚಿನ ಮಾಹಿತಿಗೆ ದೂ.ಸಂ: 9480253024,9791431827 ಸಂಪರ್ಕಿಸಲು ಸಿಪೆಟ್ ಸಂಸ್ಥೆಯ ಪ್ರಿನ್ಸಿಪಾಲ್ ನಿರ್ದೇಶಕರು ಮತ್ತು ಮುಖ್ಯಸ್ಥರಾದ ಶ್ರೀಕಾಂತ್ ಶಿರಾಲಿ ತಿಳಿಸಿದ್ದಾರೆ.

### ಪಿಹೆಚ್‌ಡಿಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

» ದಾವಣಗೆರೆ

ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಪ್ರಸಕ್ತ ಸಾಲಿನಲ್ಲಿ ಪಿಹೆಚ್‌ಡಿ ಸಂಶೋಧನಾ ಸ್ಥಾನಗಳಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಸಲ್ಲಿಸುವ ಅವಧಿಯನ್ನು ಮೇ.22 ರವರೆಗೆ ವಿಸ್ತರಿಸಲಾಗಿದೆ. ವೆಬ್‌ಸೈಟ್ www. davangereuniversity.ac.in ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಶೈಕ್ಷಣಿಕ ಅರ್ಹತೆಯ ದಾಖಲೆ, ಮೀಸಲಾತಿ ಹಾಗೂ ನಿಗದಿಪಡಿಸಿದ ಶುಲ್ಕ ಪಾವತಿಸಿದ ರಶೀದಿಯೊಂದಿಗೆ ಅರ್ಜಿ ಸಲ್ಲಿಸಬಹುದೆಂದು ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

### ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಯೋಜನೆಗಳ ಜಿಲ್ಲಾಮಟ್ಟದ ಸಭೆಯಲ್ಲಿ ಡಿಸಿ ಟಿ.ವೆಂಕಟೇಶ್ ಸೂಚನೆ

# ವೃದ್ಧಾಶ್ರಮಗಳು ನಾಮಕಾವಸ್ಥೆ ಆಗದಿರಲಿ

» ಚಿತ್ರದುರ್ಗ



ಹಿರಿಯ ನಾಗರೀಕರಿಗೆ ಆರೋಗ್ಯ ತಪಾಸಣೆ, ಸ್ವಚ್ಚತೆ, ಮೂಲಸೌಲಭ್ಯಗಳು ಕಲ್ಪಿಸುವುದು ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರದ ಅನುದಾನ ಪಡೆದು ಕಾರ್ಯನಿರ್ವಹಿಸುತಿರುವ ಸ್ವಯಂ ಸೇವಾ ಸಂಸ್ಥೆಗಳು (ಎನ್‌ಜಿಓ)ಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.ವೃದ್ಧಾಶ್ರಮಗಳು ನಾಮಕಾವಸ್ಥೆ ಆಗಬಾರದು ಎಂದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಎನ್‌ಜಿಓಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಯೋಜನೆಗಳ ಜಿಲ್ಲಾಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿರಿಯ ನಾಗರೀಕರಿಗೆ ಕಾಲಕಾಲಕ್ಕೆ ವೈದ್ಯಕೀಯ ತಪಾಸಣೆ, ಕೌನ್ಸಿಲಿಂಗ್, ವೈಯಕ್ತಿಕ ಸ್ವಚ್ಚತೆ, ಕೊಠಡಿಗಳ ಸ್ವಚ್ಚತೆ, ಅಗತ್ಯ ಸಿಬ್ಬಂದಿಗಳು ಸೇರಿದಂತೆ ದಾಖಲಾತಿಗಳನಿರ್ವಹಣೆಸಮರ್ಪಕವಾಗಿ ನಿರ್ವಹಿಸಬೇಕು ತಿಳಿಸಿದ ಅವರು, ನಿಯಮ ಪಾಲಿಸದ ವೃದ್ಧಾಶ್ರಮಗಳ ರದ್ಧತಿಗೆ ಶಿಫಾರಸ್ಸು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಯೋಜನೆಯಡಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡ ಯೋಜನೆಗಳಾದ ಹಿರಿಯ ನಾಗರಿಕರ ವಿಶ್ರಾಂತಿ ಗೃಹ (ವೃದ್ಧಾಶ್ರಮ), ನಿಗದಿತ ಪ್ರದೇಶಗಳಲ್ಲಿನ ಪ್ರೌಢಶಾಲೆಗಳ ವಿದ್ಯಾರ್ಥಿಳಿಗೆ ವಸತಿ ಶಾಲೆ ಯೋಜನೆ, ಪಿಎಂಎಜೆವೈ ಯೋಜನೆ, ಮದ್ಯ ಮತ್ತು ಮಾದಕ ವಸ್ತು ವ್ಯಸನಿಗಳ ಪುನರ್ ವಸತಿ ಕೇಂದ್ರ, ಬಾಬು ಜಗಜೀವನ್ ರಾಮ್ ಛಾತ್ರ ಆವಾಸ್ ಯೋಜನೆಗಳನ್ನು ಸಾಮಾಜಿಕ ಲೆಕ್ಕ ಪರಿಶೋಧನಾ ತಂಡ ಪರಿಶೀಲನೆ ನಡೆಸಿ, ಧನಾತ್ಮಕ ಹಾಗೂ ಋಣಾತ್ಮಕ ಅಂಶಗಳನ್ನು ಹಾಗೂ ಸಲಹೆಗಳನ್ನು ನೀಡಿದೆ. ಇದರ ಜೊತೆಗೆ ಸಂಬಂಧಪಟ್ಟ ಅಧಿಕಾರಿಗಳು ನಿರಂತರವಾಗಿ ಪರಿಶೀಲನೆ ನಡೆಸಬೇಕು. ಉತ್ತಮ ಗುಣಮಟ್ಟದ ಸೇವೆ, ಸ್ವಚ್ಚತೆ ಸೇರಿದಂತೆ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು. ಸರ್ಕಾರೇತರ ಸಂಘ ಸಂಸ್ಥೆಗಳು ಸ್ವಯಂಪ್ರೇರಿತವಾಗಿ, ಸ್ವ ಆಸಕ್ತಿಯಿಂದ ಸಂಘ–ಸಂಸ್ಥೆಗಳನ್ನು ನಡೆಸುತ್ತಿದ್ದು, ಅವಕಾಶ ಇದ್ದಲ್ಲಿ ಮಾತ್ರ ಕಾಲಕಾಲಕ್ಕೆ ಸರ್ಕಾರ ಅನುದಾನ ನೀಡುತ್ತದೆ ಎಂದು ತಿಳಿಸಿದ ಅವರು, ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಸರ್ಕಾರದ ಅನುದಾನ ಪಡೆಯುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ, ಸ್ವಯಂ ಸೇವಾ ಸಂಸ್ಥೆಗಳ ಪ್ರಸ್ತುತ ಸ್ಥಿತಿಗತಿ, ಧನಾತ್ಮಕ ಹಾಗೂ ಋಣಾತ್ಮಕ ಅಂಶಗಳ ವರದಿಯನ್ನು ಮೂರು ದಿನದೊಳಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ ರಾಜ್ಯ ಕಾರ್ಯಕ್ರಮ ವ್ಯವಸ್ಥಾಪಕ ಕೇಶವಮೂರ್ತಿ ಮಾತನಾಡಿ, ಜಿಲ್ಲೆಯ 5 ತಾಲ್ಲೂಕುಗಳಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಡಿ 12 ಗ್ರಾಮ ಪಂಚಾಯಿತಿಗಳು ಮತ್ತು 4 ನಗರ ಪ್ರದೇಶಗಳ, 16 ಹಳ್ಳಿಗಳಲ್ಲಿ ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಸ್ತುವಾರಿಯಲ್ಲಿ ವಿವಿಧ ಏಜೆನ್ಸಿಗಳ ಮೂಲಕ 2018–19 ರಿಂದ 2023–24ನೇ ಸಾಲಿನಲ್ಲಿ ಅನುಷ್ಠಾನಗೊಂಡ ಕಾಮಗಾರಿ ಮತ್ತು ಚಟುವಟಿಕೆಗಳ ಸಾಮಾಜಿಕ ಪರಿಶೋಧನೆಯನ್ನು 2024ರ ಜನವರಿ 03 ರಿಂದ ಜೂನ್ 12 ರವರೆಗೆ ಪ್ರಕ್ರಿಯೆಯನ್ನು ನಡೆಸಲಾಗಿದ್ದು, ಈ ಪ್ರಕ್ರಿಯೆಯು ಪೂರ್ಣಗೊಂಡಿರುತ್ತದೆ ಎಂದು ತಿಳಿಸಿದರು.

ರಾಜಯೋಗಿ ಸಿದ್ಧಾರ್ಥ ಎಜುಕೇಷನ್ ಸೊಸೈಟಿಯ ಹಿರಿಯ ನಾಗರೀಕರ ವಿಶ್ರಾಂತಿ ಗೃಹ, ಚಿತ್ರದುರ್ಗದ ಶ್ರೀ ಸದ್ಗುರು ಕಬೀರಾನಂದಸ್ವಾಮಿ ವೃದ್ಧಾಶ್ರಮ, ಹಿರಿಯೂರು ತಾಲ್ಲೂಕು ಧರ್ಮಪುರ ಸ್ವಾಭಿಮಾನ್ ಎಜುಕೇಷನ್ ಟ್ರಸ್ಟ್, ಚಿತ್ರದುರ್ಗದ ಡೇಟ್ ಚಾರಿಟೇಬಲ್ ಸೊಸೈಟಿ, ಹೊಸದುರ್ಗ, ಭರಮಸಾಗರ, ಬಾಬು ಜಗಜೀವನ್ ರಾಂ ಹಾಸ್ಟೆಲ್, ಚಳ್ಳಕೆರೆ ಪಿಎಂಎಜೆಎವೈ ಆದರ್ಶ ಗ್ರಾಮ ಹರಿಶ್ಚಂದ್ರ ನಾಯಕನಹಳ್ಳಿ, ಸೇವಾಲಾಲ್ ನಗರ, ಓಬಣ್ಣನಹಳ್ಳಿ, ಕಾಪರಹಳ್ಳಿ, ಹೊಸದುರ್ಗದ ನಾಗನಾಯಕನಕಟ್ಟೆ, ದೇವಿಗೆರೆ, ಅರೇಹಳ್ಳಿ, ಶ್ರೀರಾಮನಗರ, ಪಾಪೇನಹಳ್ಳಿಯ ಪಿಎಂಎಜೆಎವೈ ಯೋಜನೆಗಳನ್ನು ಸಾಮಾಜಿಕ ಪರಿಶೋಧನೆಗೆ ಒಳಪಡಿಸಲಾಗಿದ್ದು, ಧನಾತ್ಮಕ, ಋಣಾತ್ಮಕ ಅಂಶಗಳು ಹಾಗೂ ನೀಡಲಾದ ಸಲಹೆಗಳ ಕುರಿತು ಸಾಮಾಜಿಕ ಪರಿಶೋಧನೆ ಕಾರ್ಯಕ್ರಮ ಜಿಲ್ಲಾ ವ್ಯವಸ್ಥಾಪಕ ಡಾ.ನಾಗರಾಜ್ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಪಿ.ಶೀಲಾ, ಸದಸ್ಯ ಅನಿಲ್ ಕುಮಾರ್ ಸೇರಿದಂತೆ ಸರ್ಕಾರೇತರ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಇದ್ದರು.

# ಆಪರೇಷನ್ ಸಿಂಧೂರ: ದೇಶದ ಸೈನಿಕರ ಪರಾಕ್ರಮಕ್ಕೆ ಸಲಾಂ; ರಾಮದಾಸ್



» ಚಳ್ಳಕೆರೆ

ಆಪರೇಷನ್ ಸಿಂಧೂರದ ಮೂಲಕ ಉಗ್ರರಿಗೆ ತಕ್ಕ ಉತ್ತರ ನೀಡಿದ ನಮ್ಮ ಸೈನಿಕರಿಗೆ ಜಯವಾಗಲಿ ಎಂದು ತಾಲ್ಲೂಕು ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ಗ್ರಾಮದೇವತೆ ಚಳ್ಳಕೆರೆಯಮ್ಮ ದೇವಸ್ಥಾನದಲ್ಲಿ ವಿಶೇಷಪೂಜೆ ಸಲ್ಲಿಸಿದರು.

ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಕಳೆದ ಏ.22ರಂದು ಕಾಶ್ಮೀರಕ್ಕೆ ತೆರಳಿದ ಸುಮಾರು 26 ಪ್ರವಾಸಿಗರನ್ನು ಉಗ್ರಗಾಮಿಗಳು ಹಾಡುಹಗಲೇ ಗುಂಡುಕ್ಕಿಕೊಂದ ಘಟನೆ ಇಡೀ ವಿಶ್ವವನ್ನೇ ತಲ್ಲಣಗೊಳಿಸಿದೆ. ಉಗ್ರಗಾಮಿಗಳಿಗೆ ತಕ್ಕಪಾಠ ಕಲಿಸುವ ನಿರ್ಧಾರವನ್ನು ಕೈಗೊಂಡ ಕೇಂದ್ರ ಸರ್ಕಾರ ಪ್ರಧಾನಮಂತ್ರಿ ನರೇಂದ್ರಮೋದಿ ಆಪರೇಷನ್ ಸಿಂಧೂರ ಹೆಸರಿನಲ್ಲಿ ಉಗ್ರರ ನೆಲೆಗಳನ್ನು ಧ್ವಂಸ ಮಾಡುವ ಮೂಲಕ ದೇಶದಲ್ಲಿ ಉಗ್ರಗಾಮಿ ಚಟುವಟಿಕೆಗಳಿಗೆ ಸಂಪೂರ್ಣ ಕಡಿವಾಣ ಹಾಕಿದ್ದಾರೆ. ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿದ ದೇಶದವೀರಸೈನಿಕರಿಗೆನಮ್ಮೆಲ್ಲರಅಭಿನಂದನೆಗಳು ಎಂದರು. ಬಿಜೆಪಿ ಜಿಲ್ಲಾ

ಅವರು, ನಗರದ ಗ್ರಾಮ ದೇವತೆ ಚಳ್ಳಕೆರೆಯಮ್ಮ ದೇವಸ್ಥಾನದಲ್ಲಿ ವೀರಸೈನಿಕರಿಗೆ ದೇವರು ಸುಖ, ಶಾಂತಿ, ನೆಮ್ಮದಿ ನೀಡಲಿ ಎಂದು ಪ್ರಾರ್ಥಿಸಿ ಪೂಜೆಸಲ್ಲಿಸಿದರು. ಮೇ.7ರ ರಾತ್ರಿ ಉಗ್ರಗಾಮಿಗಳ ನೆಲೆಯ ಮೇಲೆ ಭಾರತೀಯ ಸೈನಿಕರ ಸರ್ಜಿಕಲ್ ದಾಳಿ ನಡೆಸಿ ಸುಮಾರು 21ಕ್ಕೂ ಹೆಚ್ಚು ಉಗ್ರಗಾಮಿಗಳ ತಾಣಗಳನ್ನು ನೆಲಸಮಗೊಳಿಸಿದರಲ್ಲದೆ, ದೇಶಕ್ಕೆ ಕಂಟಕವಾಗಿದ್ದ ಉಗ್ರಗಾಮಿಗಳನ್ನು ಸಹ ಸಧೆಬಡಿಸಿದ್ದಾರೆ. ಸೈನಿಕರ ಕಾರ್ಯ ಮೆಚ್ಚುವಂತದ್ದು. ದೇಶವನ್ನು ರಕ್ಷಿಸುವ ವೀರಸೈನಿಕರು ನಮ್ಮೆಲ್ಲರ ಅಭಿನಂದನೆಗಳು ಎಂದು ತಿಳಿಸಿದರು. ಬಿಜೆಪಿ ಯುವ ಮೋರ್ಚಾ ಜಿಲ್ಲಾ ಮಾಜಿಅಧ್ಯಕ್ಷ ಆರ್.ಪಾಲಯ್ಯ, ಹಿರಿಯ ಮುಖಂಡಸಿ.ಎಸ್.ಪ್ರಸಾದ್,ಬಿ.ಎಸ್.ಶಿವಪುತ್ರಪ್ಪ, ಡಿ.ದಯಾನಂದ, ಟಿ.ತಿಮ್ಮಪ್ಪ, ಟಿ.ಜೆ.ತಿಪ್ಪೇಸ್ವಾಮಿ, ಭಾನುಪ್ರಕಾಶ್, ಕೃಷ್ಣ ಭಾಗವಹಿಸಿದ್ದರು.

### ಭಯೋತ್ಪಾದಕರ ಶಿಬಿರದ ಮೇಲೆ ಭಾರತ ಸೇನೆಯ ಪರಾಕ್ರಮಕ್ಕೆ ಸಲಾಂ: ಸೈಯದ್ ಖಾಲಿದ್ ಅಹ್ಮದ್

» ದಾವಣಗೆರೆ



ಪಾಕಿಸ್ತಾನದ ಭಯೋತ್ಪಾದಕ ಶಿಬಿರಗಳ ಮೇಲೆ ದಾಳಿ ನಡೆಸಿ ಉಗ್ರರನ್ನು ಹೊಡೆದುರುಳಿಸಿದ ಭಾರತೀಯ ಸೇನೆಯ ಪರಾಕ್ರಮಕ್ಕೆ ಸಲಾಂ ಎಂದು ಅಖಿಲ ಭಾರತ ಯುವ ಕಾಂಗ್ರೆಸ್ ರಾಷ್ಟ್ರೀಯ ಕಾರ್ಯದರ್ಶಿ, ರಾಜ್ಯ ತೆಲಂಗಾಣ ಯುವ ಕಾಂಗ್ರೆಸ್ ಉಸ್ತುವಾರಿ ಸೈಯದ್ ಖಾಲಿದ್ ಅಹ್ಮದ್ ಹೇಳಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಭಾರತೀಯ ಸೇನೆಯು ಪಾಕ್ ನೆಲಕ್ಕೆ ನುಗ್ಗಿ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿರುವುದು ಸಂತಸದ ವಿಚಾರ. ಇಡೀ ಭಾರತ ದೇಶವೇ ಸಂಭ್ರಮದಲ್ಲಿದೆ. ಆಪರೇಷನ್ ಸಿಂಧೂರ ನಡೆಸಿ, ಪಹಲ್ಗಾಮ್ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದೆ. ಇನ್ನು ಉಗ್ರರ ಪೈಶಾಚಿಕ ಕೃತ್ಯಕ್ಕೆ ಬಲಿಯಾದ 26 ಮಂದಿ ಕುಟುಂಬಗಳು, ಸಂಬಂಧಿಕರಿಗೆ ಸ್ವಲ್ಪ ನೆಮ್ಮದಿ ತಂದಿದೆ. ಯಾವುದೇ ಕಾರಣಕ್ಕೂ ಭಯೋತ್ಪಾದನೆಗೆ ಅವಕಾಶ ನೀಡಬಾರದು. ಸಂಪೂರ್ಣವಾಗಿ ಮಟ್ಟಹಾಕಲು ಕೇಂದ್ರ ಸರ್ಕಾರ ಮುಂದಾಗಲಿದೆ. ಇದು ಉತ್ತಮ ನಡೆ ಎಂದಿದ್ದಾರೆ.

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು ಸೇನೆಯ ಪರಾಕ್ರಮ ಕೊಂಡಾಡಿದ್ದಾರೆ. ಕೇಂದ್ರ ಸರ್ಕಾರದ ಜೊತೆ ನಾವಿದ್ದೇವೆ, ಭಯೋತ್ಪಾದನೆ ನಿರ್ಮೂಲನೆಗೆ ಕೇಂದ್ರ ಸರ್ಕಾರ, ಭಾರತೀಯ ಸೇನೆ ತೆಗೆದುಕೊಳ್ಳುವ ಕ್ರಮಗಳಿಗೆ ಸಹಮತ, ಸಂಪೂರ್ಣ ಸಹಕಾರ ಇದೆ ಎಂದಿದ್ದಾರೆ. ಉಗ್ರಗಾಮಿಗಳ ನೆಲೆಗಳನ್ನು ಧೂಳೀಪಟ ಮಾಡಿ ಉಗ್ರರನ್ನು ಶಿಕ್ಷಿಸಿದ ನಮ್ಮ ಸೈನಿಕರ ಧೀರತನ ಖುಷಿಯ ವಿಚಾರ. ಪಾಕಿಸ್ಥಾನಕ್ಕೆ ಮಾತ್ರವಲ್ಲ ಭಾರತದ ಜೊತೆ ಈ ರೀತಿಯ ಕಿಡಿಗೇಡಿತನ ಮಾಡುವ ಬೇರೆ ರಾಷ್ಟಗಳಿಗೂ ಎಚ್ಚರಿಕೆ ಗಂಟೆ ಎಂದು ಸೈಯದ್ ಖಾಲಿದ್ ಅಹ್ಮದ್ ಹೇಳಿದ್ದಾರೆ.

ಭವಿಷ್ಯದಲ್ಲಿ ಭಯೋತ್ಪಾದಕರಿಂದ ಅಮಾಯಕರು ಬಲಿಯಾಗದಂತೆ ನೋಡಿಕೊಳ್ಳಬೇಕಿದೆ. ಉಗ್ರರ ಸಂಪೂರ್ಣ ನಿರ್ಮೂಲನೆ ಆಗಬೇಕಿದೆ. ಉಗ್ರರ ನೆಲೆಗಳ ಮೇಲೆ ಮಾತ್ರ ಭಾರತೀಯ ಸೇನೆ ದಾಳಿ ನಡೆಸಿದೆ. ಸಂಪೂರ್ಣ ಸ್ವಾತಂತ್ರ್ಯವನ್ನು ಭಾರತೀಯ ಸೇನೆಗೆ ನೀಡಿರುವುದು ಸ್ವಾಗತಾರ್ಹ ಎಂದು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ದೇಸಿ ತಳಿಗಳ ಉತ್ತೇಜನ ಕಾರ್ಯಕ್ರಮ

» ಚಿತ್ರದುರ್ಗ

ಕೃಷಿಯಲ್ಲಿ ದೇಸಿ ತಳಿಗಳ ಸಂರಕ್ಷಣೆಗೆ ಸರ್ಕಾರ ಮುಂದಾಗಿದ್ದು, ಕೃಷಿ ಇಲಾಖೆ ಮೂಲಕ 'ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ' ಘೋಷಿಸಿದೆ. ದೇಸಿ ತಳಿಗಳನ್ನು ಸಂರಕ್ಷಿಸುತ್ತಿರುವ ರೈತರು ಈ ಕಾರ್ಯಕ್ರಮದ ಉಪಯೋಗ ಪಡೆಯಲು ವಿವರವನ್ನು ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ದೇಸಿ ತಳಿಗಳ ನೋಂದಾಯಿಸಬೇಕಿದೆ.

ಆಯಾ ಪ್ರದೇಶದಲ್ಲಿ ಸ್ಥಳೀಯ ತಳಿಗಳು ಅಥವಾ ಸಾಂಪ್ರದಾಯಕ ಪದ್ಧತಿಯಿಂದ ಅಭಿವೃದ್ಧಿ ನಿರ್ವಹಿಸಲ್ಪಡುವ ತಳಿಗಳನ್ನು ದೇಸಿ ತಳಿಗಳೆಂದು ಕರೆಯಲಾಗಿದು, ರೈತರು ಸಾಂಪ್ರದಾಯಕ, ಪರಂಪರೆ, ಜಾನಪದ ಪ್ರಭೇದಗಳಾಗಿರುತ್ತವೆ. ಇಂತಹ ವಿಶೇಷ ದೇಶಿ ತಳಿಗಳನ್ನು ಉಳಿಸಿಕೊಂಡು ಬಂದಿರುವ ರೈತರು ಕೃಷಿ ಇಲಾಖೆಯೊಂದಿಗೆ ಕೆಲಸ ಮಾಡಲು ಅವಕಾಶವಾಗಲಿದೆ.

ಈ ಕಾರ್ಯಕ್ರಮದಡಿ ಆಯ್ಕೆಯಾದ ಬೆಳೆಗಳೆಂದರೆ ಭತ್ತ, ರಾಗಿ, ಜೋಳ, ತೊಗರಿ, ಹುರುಳಿ, ಅವರೆ, ಅಲಸಂದೆ, ಮಡಕಿಕಾಳು, ಹುಚ್ಚೆಳ್ಳು, ಕುಸುಬೆ, ಎಳ್ಳು, ನವಣೆ, ಸಾಮೆ, ಊದಲು, ಕೊರಲೆ, ಹಾರಕ, ಬರಗು ಮತ್ತು ಸಲಹಾ ಸಮಿತಿ ಶಿಫಾರಸು ಮಾಡುವ ಇತರೆ ಬೆಳೆಗಳಲ್ಲಿ ದೇಸಿ ತಳಿಗಳಿದ್ದರೆ ರೈತರು ಸಮೀಪದ ರೈತ ಸಂಪರ್ಕ ಕೇಂದ್ರದಲ್ಲಿ ನೋಂದಾಯಿಸಿಕೊಳ್ಳಬೇಕಿದೆ.

ದೇಸಿ ತಳಿಗಳ ವಿಶಿಷ್ಟ ಗುಣಲಕ್ಷಣಗಳು ಮತ್ತು ಭೌಗೋಳಿಕ ಮೂಲಗಳ ಕಾರಣದಿಂದ ವೈಜ್ಞಾನಿಕವಾಗಿ ಅಭಿವೃದ್ಧಿ ಪಡಿಸಲಾದ ಅಧಿಸೂಚಿತ ಪ್ರಭೇದಗಳಿಗಿಂತ ದೇಸಿ ತಳಿಗಳು ಪೋಷಕಾಂಶಗಳಲ್ಲಿ ಸಮೃದ್ಧವಾಗಿವೆ. ಆದರೆ, ಕೆಲವೇ ರೈತರ ಇಂತಹ ದೇಸಿ ತಳಿ ಕೃಷಿ ಮಾಡುವುದನ್ನು ಮುಂದುವರೆಸಿರುವ ಹಿನ್ನೆಲೆಯಲ್ಲಿ ನೂತನ ಕಾರ್ಯಕ್ರಮ ಪರಿಚಯಿಸಲಾಗಿದೆ.

ಕಣ್ಮರೆಯಾಗುತ್ತಿರುವ ತಳಿಗಳನ್ನು ಸಂರಕ್ಷಿಸುವ ಜತೆಗೆ ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಗುರುತಿಸುವಿಕೆ ಹಾಗೂ ಸಂರಕ್ಷಣೆ ಗುರಿ ಹೊಂದಲಾಗಿದೆ. ಗುರುತಿಸಿದ ದೇಸಿ ತಳಿಗಳನ್ನು ಅಭಿವೃದ್ಧಿಪಡಿಸಿ ಬಿಡುಗಡೆ ಮಾಡುವುದು. ದೇಸಿ ತಳಿಗಳನ್ನು ಹಿಂದಿನಿಂದಲೂ ಸಂರಕ್ಷಿಸಿ, ಕೃಷಿ ಮಾಡುತ್ತಿರುವ ರೈತರಿಗೆ ಬೆಂಬಲ ನೀಡುವ ಜತೆಗೆ ದೇಸಿ ತಳಿಗಳ ಜನಪ್ರಿಯತೆಗೆ ಬೆಂಬಲ ನೀಡುವ ಸಂಕಲ್ಪ ಮಾಡಲಾಗಿದೆ.

ರೈತರನ್ನು ಗುರುತಿಸುವುದು: ದೇಸಿ ತಳಿಗಳನ್ನು ಸಂರಕ್ಷಿಸಿ ಮತ್ತು ಬೆಳೆಸುವ ಮೂಲಕ ಕೃಷಿ ಪರಂಪರೆ ಮುಂದುವರೆಸುತ್ತಿರುವ ರೈತರನ್ನು ಗುರುತಿಸಿಸುವುದು ಮತ್ತು ಉತ್ತೇಜಿಸುವುದು ಅಗತ್ಯವಿದ್ದು, ಇದು ದೇಸಿ ತಳಿಗಳ ನಿರಂತರ ಕೃಷಿ ಪ್ರೋತ್ಸಾಹಿಸಲು ಜೀವ ವೈವಿಧ್ಯತೆ ಬೆಂಬಲಿಸಲು ಹಾಗೂ ಸುಸ್ಥಿರ ಕೃಷಿ ಪದ್ಧತಿಗಳನ್ನು ಪೋಷಿಸಲು ಸಹಕಾರಿಯಾಗಲಿದೆ.

ದೇಸಿ ತಳಿಗಳ ಸಂರಕ್ಷಣೆ ಮತ್ತು ಕೃಷಿಯಲ್ಲಿ ತೊಡಗಿರುವ ರೈತರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಒಪ್ಪಿಗೆ ಇರಬೇಕು. ಬೀಜ ಬ್ಯಾಂಕ್‌ನಲ್ಲಿರಿಸಲು ರೈತರು ಕಡ್ಡಾಯವಾಗಿ ಅಗತ್ಯ ಪ್ರಮಾಣದ ದೇಸಿ ತಳಿಗಳ ಬೀಜಗಳನ್ನು ನೀಡಲು ಸಿದ್ಧರಿರಬೇಕು. ಜಾನುವಾರು ನಿರ್ವಹಣೆ, ಕೊಟ್ಟಿಗೆ ಗೊಬ್ಬರ, ಎರೆಹುಳು ಗೊಬ್ಬರ, ಪುನರುತ್ಪಾದಕ ಕೃಷಿ ಮತ್ತು ಇತರ ಸುಸ್ಥಿರ ಕೃಷಿ ಚಟುವಟಿಕೆ ಕೈಗೊಂಡಿರುವ ರೈತರನ್ನು ಕೃಷಿ ಇಲಾಖೆ ಜತೆಯಲ್ಲಿ ಕೊಂಡೊಯ್ಯಲಿದೆ.

ಗುರುತಿಸಲು ಗುಣಲಕ್ಷಣ: ರೈತರು ತಲೆಮಾರುಗಳಿಂದ ಬೆಳೆದ ಸಾಂಪ್ರದಾಯಿಕ ಪ್ರಭೇದಗಳು, ಸ್ಥಳೀಯ ಕೃಷಿ ಪದ್ಧತಿ ಮತ್ತು ಪ್ರದೇಶಕ್ಕೆ ಹೊಂದಿಕೊಂಡಿರಬೇಕು. ದೇಸಿ ತಳಿಗಳು ವಿಶಿಷ್ಟವಾದ ಗುಣಲಕ್ಷಣಗಳನ್ನು ಹೊಂದಿರಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

### ಅಂಚೆ ಪ್ರಶಸ್ತಿ ಪ್ರಧಾನ




» ದಾವಣಗೆರೆ

ಇತ್ತೀಚೆಗೆ ಏಪ್ರಿಲ್ 29 ರಂದು ಮೈಸೂರಿನಲ್ಲಿ ನಡೆದ ಕರ್ನಾಟಕ ಅಂಚೆ ವೃತ್ತದ ಪ್ರಧಾನ ಸಮಾರಂಭದಲ್ಲಿ ದಾವಣಗೆರೆ ವಿಭಾಗದಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 11 ವೃತ್ತ ಪ್ರಶಸ್ತಿಗಳನ್ನು ನೀಡಲಾಯಿತು. ದಾವಣಗೆರೆ ಅಂಚೆ ವಿಭಾಗವು 11 ಕರ್ನಾಟಕ ವೃತ್ತ ಮಟ್ಟದ ಪ್ರಶಸ್ತಿಗಳನ್ನು ಪಡೆದಿದ್ದು ಈ ಹಣಕಾಸು ವರ್ಷದಲ್ಲಿ ಅದರ ಸಂಖ್ಯೆ ದುಪ್ಪಟ್ಟು ಆಗಬೇಕೆಂದು ಅಂಚೆ ಅಧೀಕ್ಷಕರಾದ ಚಂದ್ರಶೇಖರ್ ಅವರು ಮೇ 3 ರಂದು ನಡೆದ ಅಭಿನಂದನಾ ಸಮಾರಂಭದಲ್ಲಿ ನೌಕರರಿಗೆ ಪ್ರೇರಣೆ ನೀಡಿದರು. ದಾವಣಗೆರೆ ವಿಭಾಗದ ಸ್ಥಾನಿಕ ಸಹಾಯಕ ಅಂಚೆ ಅಧೀಕ್ಷಕರಾದ ಗುರುಪ್ರಸಾದ್, 1ನೇಉಪ ವಿಭಾಗದ ಸಹಾಯಕ ಅಂಚೆ ಅಧಿಕ್ಷಕರಾದ ನರೇಂದ್ರ ನಾಯ್ಕ್.ಕೆ.ಎಂ. ದಾವಣಗೆರೆ ಪ್ರಧಾನ ಅಂಚೆ ಕಚೇರಿಯ ಅಂಚೆ ಪಾಲಕರಾದ ಓಂಕಾರಮೂರ್ತಿ ಎಂ, ಚನ್ನಗಿರಿ ಉಪ ವಿಭಾಗದೆ ಸ್ವಾಮಿ ಜೆ ಡಿ, ದಾವಣಗೆರೆ ಎರಡನೇ ಉಪ ವಿಭಾಗದ ಅಂಚೆ ನಿರೀಕ್ಷಕರಾದ ಅಶ್ವಥ್, ಐಪಿಪಿಬಿ ಮ್ಯನೇಜರ್ ಆದ ಶ್ರೀನಿವಾಸ್, ಹಾಗೂ ಪ್ರಧಾನ ಅಂಚೆ ಕಚೇರಿಯ ಸಿಬ್ಬಂದಿ ಸಹಾಯಕರು ಹಾಗೂ ದಾವಣಗೆರ ವಿಭಾಗದ ಎಲ್ಲಾ ಅಂಚೆ ನೌಕರರು ಮತ್ತು ಗ್ರಾಮೀಣ ಅಂಚೆ ಸಿಬ್ಬಂದಿ ಹಾಜರಿದ್ದರು.



# ಮನಸಿನೊಳಗೊಂದು ಪಯಣ

**ಬಹುಶಃ ಇದರಷ್ಟು ರೋಚಕ ಇದರಷ್ಟು ಆತ್ಮ ತೃಪ್ತಿ ಇನ್ನೊಂದಿರಲಾರದು..........**

**ಹೊರಗೆಲ್ಲೋ ಪ್ರವಾಸ,**

**ಇನ್ನೊಬ್ಬರ ವಿಮರ್ಶೆ,**

**ಬದುಕಿನ ಜಂಜಾಟ,**

**ಅಜ್ಞಾನ ಅಸಹನೆ ಅಹಂಕಾರ ಮುಂತಾದ ಕಾರಣಗಳಾಗಿ**

**ನಮ್ಮೊಳಗಿನ ಬೇಡಿಕೆಗಳ ಪೂರೈಕೆಯಲ್ಲಿ ನಮ್ಮ ಒಳಗಿನ ಪ್ರಯಾಣಕ್ಕೆ ಸಮಯವೇ ಇರುವುದಿಲ್ಲ.....**

**ಕೆಲವೊಮ್ಮೆ ಸಮಯವಿದ್ದರು ಅದರ ಆಗಾಧತೆಗೆ ಅಂಜಿ ಅದರೊಳಗೆ ಪ್ರವೇಶಿಸಲು ಭಯ ಮತ್ತು ನಿರಾಸಕ್ತಿ ಮೂಡುತ್ತದೆ.....**

**ನಮ್ಮೊಳಗೆ ನಾವು ಪ್ರವೇಶಿಸದ ಬದುಕು ಒಂದು ರೀತಿಯಲ್ಲಿ ಅಪೂರ್ಣ.......**

**ನಮ್ಮೊಳಗೆ ನಾವು ಪ್ರವೇಶಿಸುವುದು ಹೇಗೆ ಮತ್ತು ಅಲ್ಲಿನ ಪಯಣ ಹೇಗೆ.......**

## ಸೃಷ್ಟಿ......

75 ಭಾಗ ನೀರು – 25 ಭಾಗ ಭೂಮಿ.......

ಆ ಭೂಮಿಯ ಮೇಲೆ ಗಾಳಿ ನೀರು ಬೆಳಕು ಬೆಟ್ಟ ಗುಡ್ಡ ಕಾಡು ನದಿ ಸರೋವರ ವಿಚಿತ್ರ ಪ್ರಾಣಿಗಳು.....

ಅದರಲ್ಲೊಂದು ವೈಶಿಷ್ಟದ ಪ್ರಾಣಿ ಎಂಬ ಮನುಷ್ಯ......

ಆ ಮನುಷ್ಯ ಪ್ರಾಣಿಯ ಬಣ್ಣದಲ್ಲಿ ಕಪ್ಪು ಬಿಳುಪು ಕಂದು ಎಂಬಿತ್ಯಾದಿ ಒಂದಷ್ಟು ವ್ಯತ್ಯಾಸಗಳು......

ಆ ವ್ಯತ್ಯಾಸಗಳಲ್ಲಿ ಈ ಪ್ರಾಣಿಯ ಆಚರಣೆಯಲ್ಲಿ ಹಿಂದೂ ಮುಸ್ಲಿಂ ಕ್ರಿಶ್ಚಿಯನ್ ಬೌದ್ಧ ಇತ್ಯಾದಿ ಇತ್ಯಾದಿ ಭಿನ್ನತೆಗಳು.....

ಆ ಭಿನ್ನತೆಗಳಲ್ಲಿ ಅಮೆರಿಕ ಚೀನಾ ಆಫ್ರಿಕಾ ರಷ್ಯಾ ಆಸ್ಟ್ರೇಲಿಯಾ ಪಾಕಿಸ್ತಾನ ಭಾರತ ಶ್ರೀಲಂಕಾ ಮುಂತಾದ ಪ್ರದೇಶಗಳ ವಿಂಗಡನೆ.....

ಆ ವಿಂಗಡನೆಗಳಲ್ಲಿ ಕನ್ನಡ ತಮಿಳು ಹಿಂದಿ ಇಂಗ್ಲಿಷ್ ಫ್ರೆಂಚ್ ಸಂಸ್ಕೃತ ಮುಂತಾದ ಅನೇಕ ಭಾಷಾ ಪ್ರಬೇಧಗಳು....

ಆ ಪ್ರಬೇಧಗಳ ಮನುಷ್ಯ ಪ್ರಾಣಿಗಳಲ್ಲಿ ಅಸ್ಪೃಶ್ಯ ಬ್ರಾಹ್ಮಣ ಗೌಡ ಲಿಂಗಾಯತ ಪಟೇಲ ಎಂಬಿತ್ಯಾದಿ ಭೇದಗಳು......


ಆ ಭೇದಗಳಲ್ಲಿ ಬಡವ ಶ್ರೀಮಂತ ಮೇಲು ಕೀಳು ವಿದ್ಯಾವಂತ ಅನಕ್ಷರಸ್ಥ ಎಂಬ ತಾರತಮ್ಯಗಳು.....

ಆ ತಾರತಮ್ಯಗಳಲ್ಲಿ ಜವಾನ ಅಧಿಕಾರಿ ಮಂತ್ರಿ ಒಡೆಯ ಆಳು ಕೂಲಿ ಎಂಬ ವಿಭಾಗಗಳು......

ಆ ವಿಭಾಗಗಳಲ್ಲಿ ಅಪ್ಪ ಅಮ್ಮ ಗಂಡ ಹೆಂಡತಿ ಮಕ್ಕಳು ಎಂಬ ಅನೇಕ ಸಂಬಂಧಗಳು......

ಆ ಸಂಬಂಧಗಳಲ್ಲಿ ಆರ್ಥಿಕ ಸಾಮಾಜಿಕ ಶೈಕ್ಷಣಿಕ ರಾಜಕೀಯ ಮುಂತಾದ ಅಸಮಾನತೆಗಳು....

ಆ ಅಸಮಾನತೆಗಳಲ್ಲಿ ನಮ್ಮ ಸ್ಥಾನಮಾನವನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು.....



ಅಂದರೆ ಸೃಷ್ಟಿಯ ಮೂಲದಿಂದ ನಮ್ಮ ಯೋಚನಾ ಶಕ್ತಿ ರೂಪಗೊಳ್ಳಬೇಕು ಮತ್ತು ಪ್ರಾರಂಭವಾಗಬೇಕು......

## ಮುಂದೆ....

ಇಷ್ಟು ಅರ್ಥಮಾಡಿಕೊಳ್ಳುವ ವೇಳೆಗಾಗಲೇ ಸೃಷ್ಟಿಯಲ್ಲಿ ನಮ್ಮ ಅಸ್ತಿತ್ವದ ಒಂದು ಅಂದಾಜು, ಈ ಸಮಾಜ ಅಥವಾ ದೇಶದಲ್ಲಿ ಹಾಗು ಕೌಟುಂಬಿಕ ವ್ಯವಸ್ಥೆಯಲ್ಲಿ ನಮ್ಮ ಸ್ಥಾನಮಾನದ ಒಂದು ಚಿತ್ರಣ ನಮ್ಮ ಮನಸ್ಸಿನಲ್ಲಿ ಮೂಡುತ್ತದೆ.

ಆ ಮನಸ್ಸಿನ ಪ್ರವೇಶ ದ್ವಾರದ ಮೂಲಕ ಆತ್ಮದೊಳಗೆ ಹೆಜ್ಜೆ ಇಡಲು ಪ್ರಾರಂಭಿಸಿ....

ಇಲ್ಲಿಯವರೆಗಿನ ನಿಮ್ಮ ಅನುಭವ ಅಧ್ಯಯನ ಚಿಂತನೆ ಅರಿವು ಎಲ್ಲವನ್ನೂ ಒಟ್ಟುಗೂಡಿಸಿ ಒಂದೊಂದು ಹೆಜ್ಜೆ ಇಡುತ್ತಾ ಮುಕ್ತವಾಗಿ ಸಂಚರಿಸಿ......

ಸೊನ್ನೆಯಿಂದ ನೂರರವರೆಗಿನ ಸಮಯ ಅಥವಾ ಕಾಲವನ್ನು ಮನುಷ್ಯ ಪ್ರಾಣಿಯ ಜೀವನ ಅಥವಾ ಬದುಕು ಎಂದು ಪರಿಗಣಿಸಲಾಗುತ್ತದೆ.........

ಈ ಬದುಕಿನ ಪಯಣದ ಹಾದಿ ಅರ್ಥ ಉದ್ದೇಶ ಗುರಿ ಸಾರ್ಥಕತೆ ಸೃಷ್ಟಿಯ ಸಹಜತೆ ಎಲ್ಲವನ್ನೂ ನಮ್ಮ ತಿಳಿವಳಿಕೆಯ ಮಿತಿಯಲ್ಲಿ ನಾವು ಗ್ರಹಿಸಿದಂತೆ ನಮ್ಮೊಳಗೆ ಒಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ನಮ್ಮ ಜವಾಬ್ದಾರಿ ಕರ್ತವ್ಯ ಯಾವುದು ಎಂದು ಸ್ಪಷ್ಟಪಡಿಸಿಕೊಳ್ಳಬೇಕು. ನಮ್ಮ ದೇಹ ಮತ್ತು ಮನಸ್ಸಿನ ಬೇಡಿಕೆ ಮತ್ತು ಪೂರೈಕೆಯ ಮಾರ್ಗಗಳನ್ನು ಗುರುತಿಸಿಕೊಳ್ಳಬೇಕು.

ವೈಯಕ್ತಿಕತೆ, ಕೌಟುಂಬಿಕತೆ, ಸಾಮಾಜಿಕತೆ, ನೈತಿಕತೆ, ಮಾನವೀಯತೆ ಎಲ್ಲವನ್ನೂ ಸಮಗ್ರವಾಗಿ ಪರಿಶೀಲಿಸಿ ನಮ್ಮ ನಡೆಯನ್ನು ರೂಪಿಸಿಕೊಳ್ಳಲು ಪ್ರಯತ್ನಿಸಬೇಕು......

ಅತಿಮುಖ್ಯವಾಗಿ ಬದುಕಿನ ಏರಿಳಿತಗಳಲ್ಲಿ ನಮ್ಮ ಪ್ರತಿಕ್ರಿಯೆ ಮತ್ತು ನಿಯಂತ್ರಣ ಮನಸ್ಸಿನೊಳಗಿನ ಪಯಣದಲ್ಲಿ ಮಹತ್ವ ಪಡೆಯಬೇಕಾದ ವಿಷಯ.....

ಏಕೆಂದರೆ, ಈ ಪಯಣದಲ್ಲಿ ನಮ್ಮ ಹುಡುಕಾಟ ನಮ್ಮೊಳಗಿನ ಅಂತಃ ಶಕ್ತಿಯನ್ನು ಉದ್ದೀಪನಗೊಳಿಸುವಂತಿರಬೇಕು. ಭವಿಷ್ಯದ ಕನಸುಗಳಿಗೆ ನೀರೆರೆಯುವಂತಿರಬೇಕು. ನಮ್ಮಲ್ಲಿರುವ ಕತ್ತಲನ್ನು ಕಳೆದು ಬೆಳಕು ಮೂಡುವಂತಿರಬೇಕು. ನಮ್ಮ ನೆಮ್ಮದಿಯ ಮಟ್ಟ ಹೆಚ್ಚುವಂತಿರಬೇಕು. ಒಟ್ಟಿನಲ್ಲಿ ಈ ಪಯಣ ನಮಲ್ಲಿ ಸ್ಫೂರ್ತಿ ತುಂಬಿ ನಮ್ಮನ್ನು ಪುನಶ್ಚೇತನ ಗೊಳಿಸುವಂತಿರಬೇಕು. ನಮ್ಮಲ್ಲಿನ ಸಂಕುಚಿತತೆ ಕಡಿಮೆಯಾಗಿ ವಿಶಾಲ ಮನೋಭಾವ ಬೆಳೆಸುವಂತಿರಬೇಕು.......

ಏಕೆಂದರೆ, ಮನಸ್ಸೆಂಬುದು ರೀ ಚಾರ್ಜಬಲ್ ಬ್ಯಾಟರಿ ಇದ್ದಂತೆ. ಅದನ್ನು ಆಗಾಗ ರೀ ಚಾರ್ಜ್ ಮಾಡುತ್ತಲೇ ಇರಬೇಕು ಮತ್ತು ಅದನ್ನು ಹೊರಗಿನ ಮೂಲಗಳ ಜೊತೆಗೆ ಒಳಗಿನ ಸಂಪನ್ಮೂಲಗಳನ್ನು ಹೆಚ್ಚಾಗಿ ಬಳಸಿ ರೀ ಚಾರ್ಜ್ ಮಾಡಿದರೆ ಅದು ದೀರ್ಘ ಬಾಳಿಕೆ ಮತ್ತು ಹೆಚ್ಚು ದಕ್ಷತೆಯಿಂದ ಕ್ರಿಯಾತ್ಮಕವಾಗಿ ಕೆಲಸ ಮಾಡುತ್ತದೆ.....

ಅದಕ್ಕಾಗಿ ಆಗಾಗ ಅನಂತತೆಯೆಂಬ ಮನಸ್ಸಿನೊಳಗೆ ಸದಾ ಪಯಣಿಸುತ್ತಲೇ ಇರಬೇಕು. ಯಾರೋ ಯೋಗಿಗಳು, ಆಧ್ಯಾತ್ಮಿಕ ಗುರುಗಳು, ಸಾಧಕರು, ಋಷಿ ಮುನಿಗಳು ಮುಂತಾದವರು ಮಾತ್ರ ಮಾಡುವ ಮತ್ತು ಮಾಡಲು ಸಾಧ್ಯವಾಗುವ ವಿಷಯವಿದು. ಸಾಮಾನ್ಯ ಜನರಿಗೆ ಅಸಾಧ್ಯ ಎಂಬ ತಪ್ಪು ಕಲ್ಪನೆ ಮೂಡಿಸಲಾಗಿದೆ.....


ಎಲ್ಲಾ ಆರೋಗ್ಯವಂತ ಸಹಜ ಸಾಮಾನ್ಯ ವ್ಯಕ್ತಿಗಳು ಸಹ ತಮ್ಮ ಮನಸ್ಸಿನೊಳಗೆ ತಮಗೆ ಸಾಧ್ಯವಿರುವ ತಮ್ಮ ಮಿತಿಯಲ್ಲಿ ಸದಾ ಪ್ರಯಾಣಿಸಬಹುದು. ನೀವು ಸಹ ಸ್ವಚ್ಛಂದವಾಗಿ, ಮುಕ್ತವಾಗಿ ಪ್ರಯತ್ನಿಸಿ ನೋಡಿ. ಪರಿಣಾಮ – ಫಲಿತಾಂಶ ನಿಮ್ಮ ವಿವೇಚನೆಗೆ ಬಿಡುತ್ತಾ....,

ಇದೊಂದು ದೀರ್ಘ ಮತ್ತು ನಿರಂತರ ಅಭ್ಯಾಸ. ಬದುಕಿನ ಕೊನೆಯ ಪುಟದವರೆಗೂ ನಡೆಯುತ್ತಲೇ ಇರಬೇಕು. ಆ ವ್ಯಕ್ತಿಯ ಜೀವನಮಟ್ಟ ಖಂಡಿತ ಸುಧಾರಣೆಯಾಗಿ ಕಿಣಚಿಟುಣಥಿ ಠಜಿ ಖಜಿಜ ಉನ್ನತ ದರ್ಜೆಗೇರುವ ಎಲ್ಲಾ ಸಾಧ್ಯತೆ ಇದೆ ಎಂಬ ಭರವಸೆ ಮೂಡಿಸುತ್ತಾ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಸ್ಸುಗಳ ಅಂತರಂಗದ ಚಳವಳಿ,



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T